ಕರ್ನಾಟಕ ಸರ್ಕಾರ

ಸಂಖ್ಯೆ:ಸಕನಿ/ಪ.ಜಾ.ಉ.ಯೋ-1/ಸಿ.ಆರ್-91/2018-19

ಸಮಾಜ ಕಲ್ಯಾಣ ಆಯುಕ್ತರ ಕಛೇರಿ,
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:01-03-2019

ಇವರಿಗೆ,

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
ವಿಕಾಸ ಸೌಧ,
ಬೆಂಗಳೂರು.

C-4074/19 11/03

ಮಾನ್ಯರೆ,

ವಿಷಯ : ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಗಳಡಿ 5 ವರ್ಷಗಳಲ್ಲಿ ಅನುಷ್ಠಾನಗೊಂಡಿರುವ ಕಾರ್ಯಕ್ರಮಗಳ ವಿವರವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಕುರಿತು.

ಉಲ್ಲೇಖ : ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ ಅಧಿನಿಯಮ 2013 ಮತ್ತು ನಿಯಮಗಳು 2017.

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ; ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ ಅಧಿನಿಯಮ 2013 ಮತ್ತು ನಿಯಮಗಳು 2017 ರನ್ವಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಕಳೆದ 5 ವರ್ಷಗಳಲ್ಲಿ ತಮ್ಮ ಇಲಾಖೆಗೆ ಹಂಚಿಕೆ ಮಾಡಿರುವ ಅನುದಾನದ ವಿವರ ಕೆಳಕಂಡಂತಿದೆ.

(ರೂ.ಕೋಟಿಗಳಲ್ಲಿ)

| ವರ್ಷ | ಹಂಚಿಕೆ | | | ವೆಚ್ಚ | | | ಶೇ. ಪ್ರಗತಿ |
|---|---|---|---|---|---|---|---|
| | SCSP | TSP | Total | SCSP | TSP | Total | |
| 2014-15 | 356.46 | 139.76 | 496.22 | 226.43 | 80.95 | 307.38 | 61 |
| 2015-16 | 382.06 | 158.03 | 540.09 | 369.71 | 112.55 | 482.26 | 89 |
| 2016-17 | 585.05 | 196.84 | 781.89 | 518.3 | 158.87 | 677.17 | 86 |
| 2017-18 | 653.61 | 265.12 | 918.73 | 565.22 | 317.62 | 882.84 | 96 |
| 2018-19 | 591.29 | 551.41 | 1142.70 | 292.58 | 120.15 | 412.73 | 36 |
| ಒಟ್ಟು | 2568.47 | 1311.16 | 3879.63 | 1972.24 | 790.14 | 2762.38 | 71 |

ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ ನಿಯಮಗಳು 2017 ರ ನಿಯಮ (14), ಉಪನಿಯಮ (3) (ಎ, (ಬಿ) ಮತ್ತು (ಸಿ) ಯಂತೆ ಪ್ರತಿಯೊಂದು ಇಲಾಖೆಯು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಗಳ ಅನುಷ್ಠಾನದ ಬಗ್ಗೆ ತನ್ನ ಜಾಲತಾಣದಲ್ಲಿ ಈ ಕೆಳಕಂಡ ಮಾಹಿತಿಯನ್ನು ಪ್ರಕಟಿಸತಕ್ಕದ್ದು ಎಂದು ವಿವರಿಸಲಾಗಿದೆ.

ಎ) ಉಪ ಹಂಚಿಕೆಯ ಅಡಿಯಲ್ಲಿ ಯೋಜನಾವಾರು ವಿವರಗಳು ಹಾಗೂ ಜಿಲ್ಲಾ ಹಂಚಿಕೆಗಳ ವಿವರಗಳು

Scanned by CamScanner

ಬಿ) ಪ್ರತಿ ತ್ರೈಮಾಸಿಕ ಮುಕ್ತಾಯವಾದ ತರುವಾಯ, ವಿವಿಧ ಯೋಜನೆಗಳ ಅಡಿಯಲ್ಲಿ ನೆರವು ಪಡೆದ ಫಲಾನುಭವಿಗಳ ಪಟ್ಟಿ

ಸಿ) ಕೈಗೊಂಡಿರುವ ಮತ್ತು ಪೂರ್ಣಗೊಳಿಸಿರುವ ಕಾಮಗಾರಿಗಳು ಒಳಗೊಂಡಂತೆ ಪ್ರತಿ 6 ತಿಂಗಳಿಗೊಮ್ಮೆ ಯೋಜನೆಗಳ ಅನುಷ್ಠಾನದಲ್ಲಿ ಸಾಧಿಸಿರುವ ಸಾಧನೆಗಳ ವಿವರಗಳು

ಆದ್ದರಿಂದ, ಈ ಎರಡು ಉಪ ಹಂಚಿಕೆಗಳಡಿ ಕಳೆದ 5 ವರ್ಷಗಳಲ್ಲಿ ಅನುಷ್ಠಾನ ಮಾಡಿದ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಕೆಳಕಂಡ ವಿವರಗಳನ್ನು ತಮ್ಮ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲು ಕೋರಿದೆ.

- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳ ಪಟ್ಟಿ ಹಾಗೂ ನೀಡಿದ ವೈಯಕ್ತಿಕ ಸೌಲಭ್ಯ/ಸವಲತ್ತುಗಳ ವಿವರ
- ಮೀಸಲು ಕ್ಷೇತ್ರಗಳಲ್ಲಿ ಆಸ್ಪತ್ರೆಗಳ ಕಟ್ಟಡಗಳ ದುರಸ್ತಿ ಮತ್ತು ಉನ್ನತೀಕರಣ ಹಾಗೂ ಆಸ್ಪತ್ರೆಗಳ ನಿರ್ಮಾಣ ಕಾಮಗಾರಿಗಳು ಹಾಗೂ ಛಾಯಾಚಿತ್ರಗಳ ವರ್ಷವಾರು ವಿವರ

ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ ಅಧಿನಿಯಮ 2013 ಮತ್ತು ನಿಯಮಗಳು 2017 ರಡಿ ಅನುಷ್ಠಾನ ಮಾಡುವ ಕಾರ್ಯಕ್ರಮಗಳು ಸರ್ಕಾರದ ಮಹತ್ವಾಕಾಂಕ್ಷಿ ಕಾರ್ಯಕ್ರಮವಾಗಿರುತ್ತದೆ. ಈ ಕಾರ್ಯಕ್ರಮಗಳ ಮೂಲಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ಜೀವನಮಟ್ಟ ಸುಧಾರಣೆಯಲ್ಲಿ ಆಗಿರುವ ಪರಿಣಾಮಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ಒದಗಿಸುವುದರಿಂದ ಇನ್ನಷ್ಟು ಹೆಚ್ಚಿನ ಸಂಖ್ಯೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರು ಸದರಿ ಸೌಲಭ್ಯಗಳನ್ನು ಪಡೆಯಲು ಪ್ರೇರಣೆ ನೀಡಿದಂತಾಗುತ್ತದೆ.

ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ರಾಜ್ಯ ಪರಿಷತ್ ಸಭೆಯಲ್ಲಿ ಸದರಿ ಮಾಹಿತಿಯನ್ನು ಮಂಡಿಸಬೇಕಾಗಿರುವ ಕಾರಣ ಮೇಲ್ಕಂಡ ಮಾಹಿತಿಯನ್ನು ತಮ್ಮ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲು ಸಂಬಂಧಿಸಿದವರಿಗೆ ಸೂಕ್ತ ನಿರ್ದೇಶನ ನೀಡಲು ಗೌರವಪೂರ್ವಕವಾಗಿ ಕೋರಿದೆ.

ತಮ್ಮ ವಿಶ್ವಾಸಿ,

(ವಿ.ಅನ್ಬುಕುಮಾರ್, ಭಾ.ಆ.ಸೇ)
ಆಯುಕ್ತರು
ಸಮಾಜ ಕಲ್ಯಾಣ ಇಲಾಖೆ
ಬೆಂಗಳೂರು.

01/03/19 01/03/19

Scanned by CamScanner